**ದಿನಾಂಕಃ 24-07-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ ಅದರಲ್ಲಿ ಬರೆದಿರುವ ವಿಷಯಗಳು ನಾನೇ ಹೇಳಿ ಬರೆಸಿದ್ದೇನೆ. ಸದರಿ ಸಂಗತಿಗಳು ಸತ್ಯದಿಂದ ಕೂಡಿರುತ್ತವೆ.

**ಮುಖ್ಯ ವಿಚಾರಣೆ ಅರ್ಜಿದಾರರ ಪರ ಶ್ರೀ ಸಿ ಬಿ ಕೆ ವಕೀಲರಿಂದಃ**

ಅಪಘಾತಕ್ಕೆ ಸಂಬಂಧಿಸಿದ ಪ್ರ.ವ.ವರದಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ -1 ಎಂದು, ಪಿರ್ಯಾದಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ -2 ಎಂದು, ಸ್ಥಳ ಪಂಚನಾಮೆ ಹಾಗೂ ಪೋಟೋಗಳ ಹಾಗೂ ಹಾತ್ ನಕಾಶೆ(ಸ್ಕೆಚ್)ಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ -3 ಎಂದು, ವಾಹನದ ಜಪ್ತಿ ಪಂಚನಾಮೆ ಹಾಗೂ ಪೋಟೋಗಳ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ -4 ಎಂದು, ಐಎಂವಿ ವರದಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ -5 ಎಂದು, ಗಾಯದ ಪ್ರಮಾಣ ಪತ್ರವನ್ನು ಕೊಟ್ಟಿದ್ದು ಅದನ್ನು ನಿ ಪಿ -6 ಎಂದು, ಡಿಸ್ಚಾರ್ಜ ಸಮ್ಮರಿಯನ್ನು ನಿ ಪಿ -7 ಎಂದು, ಮೆಡಿಕಲ್ ಬಿಲ್ಲನ್ನು ನಿ ಪಿ -8 ಎಂದು, ಒಪಿಡಿ ಕಾರ್ಡನ್ನು ನಿ ಪಿ -9 ಎಂದು, ಅಂಗನ್ಯೂನತ ಪ್ರಮಾಣ ಪತ್ರವನ್ನು ಕೊಟ್ಟಿದ್ದು ಅದನ್ನು ನಿ ಪಿ 10 ಎಂದು, ಎಕ್ಸರೆ ಪಿಲಂ/ ಕ್ಷ-ಕಿರಣ ಫಿಲಂ ನ್ನು ಕೊಟ್ಟಿದ್ದು ಅದನ್ನು ನಿ ಪಿ 11 ಎಂದು, ಅಂತಿಮ ವರದಿಯನ್ನು ನಿ ಪಿ -12 ಎಂದು ಗುರುತಿಸಲಾಯಿತು.

ಅರ್ಜಿದಾರರ ಮೂಲ ಆದಾರ ಕಾರ್ಡ, ಪ್ಯಾನ್ ಕಾರ್ಡ, ಬ್ಯಾಂಕ್ ಪಾಸ್ ಬುಕ್ ಮೂಲ ದಾಖಲೆಗಳ ಜೊತೆ ಅವುಗಳ ನೋಟರಿ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಮೂಲ ದಾಖಲೆಗಳ ಜೊತೆ ಪರಿಶೀಲಿಸಿದ ನಂತರ ಸದರಿ ದಾಖಲೆಗಳು ದಿನ ಬಳಕೆಗೆ ಬೇಕಾಗಿರುವುದರಿಂದ ಅವುಗಳ ನೋಟರಿ ಪ್ರತಿಗಳನ್ನು ನಿ ಪಿ-13 ರಿಂದ ನಿ ಪಿ- 15 ಎಂದು ಗುರುತಿಸಲಾಯಿತು. ಅರ್ಜಿದಾರರ ಮೂಲ ಆದಾರ ಕಾರ್ಡ, ಪ್ಯಾನ್ ಕಾರ್ಡ, ಬ್ಯಾಂಕ್ ಪಾಸ್ ಬುಕ್ ಗಳನ್ನು ಅರ್ಜಿದಾರರಿಗೆ ಹಿಂದುರಿಗಿಸಲಾಯಿತು.

ಅರ್ಜಿಯಲ್ಲಿ ಕೇಳಿದಂತೆ ಅರ್ಜಿಯನ್ನು ಪುರಸ್ಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀ ಪಿ ಕೆ ವಕೀಲರಿಂದಃ**

ಅಪಘಾತವು ಶಿಕಾರಿಪುರದ ಎಲಿಪ್ಯಾಡ್ ಹತ್ತಿರ ದಿನಾಂಕ 12.05.2024 ರಂದು ಆಗಿರುತ್ತದೆ. ಅಪಘಾತವಾದ ತಕ್ಷಣ ನಾನು ಶಿಕಾರಿಪುರದ ಸರ್ಕಾರಿ ಆಸ್ಪತ್ರೆಗೆ ಹೋಗಿರುತ್ತೇನೆ. ಆನಂತರ ಶಿವಮೊಗ್ಗದ ಮೆಗ್ಗಾನ ಆಸ್ಪತ್ರೆಗೆ ಹೋಗಿರುತ್ತೇನೆ. ಮೆಗ್ಗಾನ ಆಸ್ಪತ್ರೆಯಲ್ಲಿ 15 ದಿವಸಗಳ ಕಾಲ ದಾಖಲಾಗಿದ್ದೇನು. ನಾನು ಹಾಜರುಪಡಿಸಿದ ದಾಖಲೆಯಲ್ಲಿ ನಾನು 8 ದಿನಗಳ ಕಾಲ

ದಾಖಲಾಗಿದ್ದೆ ಎಂದು ತೋರಿಸುತ್ತದೆ ಎಂದರೆ ಸರಿ. ನನಗೆ ಅದು ಸರಿಯಾಗಿ ನೆನಪಿಲ್ಲ. ನಂತರ 6 ತಿಂಗಳು ಬಿಟ್ಟು ಎಸ್ ಎಸ್ ಆಸ್ಪತ್ರೆ ದಾವಣಗೆರೆಗೆ ಮುಂದುವರೆದ ಚಿಕಿತ್ಸೆಗೆ ಹೋಗಿರುತ್ತೇನೆ. ಅಪಘಾತದಿಂದ ನನಗೆ ಎಡಮುಂಗೈ ಮತ್ತು ಎಡಪಾದ ಹಾಗೂ ಬಲ ಹಿಮ್ಮಡಿಗೆ ಗಾಯವಾಗಿದ್ದು ಅಲ್ಲಿ ಪಿ ಒ ಪಿ ಬ್ಯಾಂಡೇಜ್ ಹಾಕಿದ್ದರು. ಸರ್ಕಾರಿ ಆಸ್ಪತ್ರೆ ಮತ್ತು ಮೆಗ್ಗಾನ ಆಸ್ಪತ್ರೆಯಲ್ಲಿ ಉಚಿತವಾಗಿ ಚಿಕಿತ್ಸೆ ನೀಡಿರುತ್ತಾರೆ. ನಾನು ಕೂಲಿ ಕೆಲಸ ಮಾಡುತ್ತೇನೆ. ನನ್ನ ಬಳಿ ಪಡಿತರ ಚೀಟಿ ಇಲ್ಲ. ಅಪಘಾತವಾಗಿ ಎಷ್ಟು ದಿನದ ನಂತರ ಸಂಪೂರ್ಣ ಗುಣಮುಖಳಾಗಿದ್ದೆ ಎಂದರೆ ಇನ್ನು ನೋವು ಬರುತ್ತದೆ ಎಂದು ಹೇಳುತ್ತಾರೆ. ನನಗೆ ಅಪಘಾತದಲ್ಲಿ ಸಾಮಾನ್ಯ ಸ್ವರೂಪದ ಗಾಯಗಳಾಗಿದ್ದವು ಎಂದರೆ ಸರಿಯಲ್ಲ. ನನಗೆ ಚಿಕಿತ್ಸೆ ನೀಡಿದ ಮೆಗ್ಗಾನ ಆಸ್ಪತ್ರೆಯ ವೈದ್ಯರಿಂದ ಸಾಕ್ಷಿ ಮಾಡಿಸಲು ತೊಂದರೆ ಇಲ್ಲ ಎಂದರೆ ಸರಿ. ನನಗೆ ಅಂಗನ್ಯೂನತೆ ಪ್ರಮಾಣಪತ್ರ ನೀಡಿದ ವೈದ್ಯರು ಚಿಕಿತ್ಸೇ ನೀಡಿದ ವೈದ್ಯರು ಅಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಸಿಗಲಿ ಎಂದು ಹೆಚ್ಚಿನ ಪ್ರಮಾಣದ ಸುಳ್ಳು ಅಂಗನ್ಯೂನತೆ ಪ್ರಮಾಣ ಪತ್ರ ತೆಗೆದುಕೊಂಡು ಬಂದಿದ್ದೇನೆ ಎಂದರೆ ಸರಿಯಲ್ಲ. ನಾನು 8 ನೇ ತರಗತಿಯವರೆಗೆ ಓದಿರುತ್ತೇನೆ. ನನಗೆ ಶಾಲಾ ದಾಖಲಾತಿಯನ್ನು ಹಾಜರುಪಡಿಸಲು ಯಾವುದೇ ತೊಂದರೆ ಇಲ್ಲ. ನಾನು 15.06.1984 ರಂದು ಜನಿಸಿರುತ್ತೇನೆ. ನಾನು ಅರ್ಜಿಯಲ್ಲಿ ಕೂಲಿ ಮಾಡಿ ತಿಂಗಳಿಗೆ 30,000/- ರೂಗಳನ್ನು ಸಂಪಾದಿಸುತ್ತೇನೆ ಎಂದು ಹೇಳಿದ್ದು ಆ ಕುರಿತು ಯಾವುದೇ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಸುಳ್ಳು ದಾಖಲೆಗಳನ್ನು ಹಾಜರುಪಡಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಸಹಿ/-

(ಶ್ರೀಮತಿ ಹುಲ್ಲೂರ ಹೇಮಲತಾ ಬಸಪ್ಪ)
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.